ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸುದ್ದಿಗಳು

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ ದಿನಾಂಕ : DATE : 14/3/2019

# ಎಸ್.ಮೂರ್ತಿ ಅಮಾನತು ತೀರ್ಪು ಕಾಯ್ದಿರಿಸಿದ ಹೈ

ವಿಶ್ವವಾಣಿ 14/3/19



**ಬೆಂಗಳೂರು:** ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ತಮ್ಮನ್ನು ಅಮಾನತುಗೊಳಿಸಿದ ವಿಧಾನಸಭೆ ವಿಶೇಷ ಮಂಡಳಿಯ ಆದೇಶ ಪ್ರಶ್ನಿಸಿ ಎಸ್.ಮೂರ್ತಿ ಸಲ್ಲಿಸಿರುವ ತಕರಾರು ಅರ್ಜಿಯ ತೀರ್ಪನ್ನು ಹೈಕೋರ್ಟ್ ಕಾಯ್ದಿರಿಸಿದೆ.

ಅರ್ಜಿ ಕುರಿತ ವಾದ ಪ್ರತಿವಾದ ಪೂರ್ಣಗೊಂಡ ಹಿನ್ನೆಲೆಯಲ್ಲಿ ನ್ಯಾ. ಎಸ್. ಸುನಿಲ್ ದತ್ ಯಾದವ್ ಅವರಿದ್ದ ಏಕಸದಸ್ಯ ಪೀಠ ಬುಧವಾರ ತೀರ್ಪನ್ನು ಕಾಯ್ದಿರಿಸಿತು. ವಿಚಾರಣೆ ವೇಳೆ ಮೂರ್ತಿ ಪರ ವಾದ ಮಂಡಿಸಿದ ವಕೀಲರು, ಅರ್ಜಿದಾರರ ಅಭಿಪ್ರಾಯ ಪಡೆಯದೆ ಅಮಾನತು ಆದೇಶ ಹೊರಡಿಸಲಾಗಿದ್ದು, ನೈಸರ್ಗಿಕ ನ್ಯಾಯದ ಉಲ್ಲಂಘನೆಯಾಗಿದೆ ಎಂದು ಆಕ್ಷೇಪಿಸಿದರು. ಆದರೆ, ಅಡ್ವೊಕೇಟ್ ಜನರಲ್ ಉದಯ ಹೊಳ್ಳ , ಅರ್ಜಿದಾರರ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ಸಾಬೀತಾದ ಹಿನ್ನೆಲೆ ಯಲ್ಲಿ ಅಮಾನತು ಮಾಡಲಾಗಿದೆ ಎಂದು ಸಮರ್ಥನೆ ನೀಡಿದರು.

**ಪ್ರಕರಣವೇನು?:** 201617ನೇ ಸಾಲಿನಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆದ ಅಧಿವೇಶನಕ್ಕೆ ಸಂಬಂಧಿಸಿದಂತೆ ಕೈಗೊಳ್ಳಲಾದ ಕಾಮಗಾರಿ ಹಾಗೂ ಇತರೆ ಖರ್ಚು ವೆಚ್ಚಗಳಲ್ಲಿ ಅವ್ಯವಹಾರ ನಡೆಸಿದ ಆರೋಪಕ್ಕೆ ಸಂಬಂಧಿಸಿದಂತೆ ವಿಧಾನಸಭೆ ಕಾರ್ಯದರ್ಶಿಯಾಗಿದ್ದ ಎಸ್.ಮೂರ್ತಿ ಅವರನ್ನು ಸೇವೆಯಿಂದ ಅಮಾನತುಗೊಳಿಸುವಂತೆ ಮುಖ್ಯಮಂತ್ರಿ ಅಧ್ಯಕ್ಷತೆಯ ಶಾಸಕಾಂಗದ ವಿಶೇಷ ಮಂಡಳಿ ಆದೇಶ ಹೊರಡಿಸಿತ್ತು. ಅದರಂತೆ ವಿಧಾನಸಭೆ ಅಧೀನ ಕಾರ್ಯದರ್ಶಿ ಡಿ.27, 2018ರಂದು ಆದೇಶ ಹೊರಡಿಸಿದ್ದರು.

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ ದಿನಾಂಕ : DATE : 14/3/2019

# ಮೂರ್ತಿ ಅಮಾನತು: ತೀರ್ಪು ಕಾಯ್ದಿರಿಸಿದ ಹೈಕೋರ್ಟ್

**ಬೆಂಗಳೂರು:** ವಿಧಾನಸಭೆಯ ಕಾರ್ಯದರ್ಶಿ ಹುದ್ದೆಯಿಂದ ಎಸ್.ಮೂರ್ತಿ ಅವರನ್ನು ಅಮಾನತು ಮಾಡಿದ ಕ್ರಮ ಪ್ರಶ್ನಿಸಿ ಸಲ್ಲಿಸಿರುವ ಅರ್ಜಿ ವಿಚಾರಣೆಯನ್ನು ಬುಧವಾರ ಪೂರ್ಣಗೊಳಿಸಿದ ಹೈಕೋರ್ಟ್ ತೀರ್ಪು ಕಾಯ್ದಿರಿಸಿರುವುದಾಗಿ ತಿಳಿಸಿತು.

ತಮ್ಮನ್ನು ಹುದ್ದೆಯಿಂದ ಸ್ಪೀಕರ್ ನೇತೃತ್ವದ ಸಮಿತಿ ಅಮಾನತು ಮಾಡಿ ಹೊರಡಿಸಿದ್ದ ಆದೇಶ ಪ್ರಶ್ನಿಸಿ ಎಸ್.ಮೂರ್ತಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ಏಕಸದಸ್ಯ ಪೀಠ ವಿಚಾರಣೆ ನಡೆಸಿತು. ಈ ವೇಳೆ ಮೂರ್ತಿ ಪರ ವಾದಿಸಿದ ಹಿರಿಯ ವಕೀಲ ಬಿ.ವಿ.ಆಚಾರ್ಯ, ಅರ್ಜಿದಾರರನ್ನು ವಿಚಾರಣೆ ನಡೆಸದೆ ಅಮಾನತು ಮಾಡಿರುವುದು ಕಾನೂನು ಬಾಹಿರ. ಹೀಗಾಗಿ ವಿಧಾನಸಭೆ ಸ್ಪೀಕರ್ ಆದೇಶವನ್ನು ರದ್ದುಗೊಳಿಸಬೇಕೆಂದು ಪೀಠಕ್ಕೆ ಮನವಿ ಮಾಡಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸರಕಾರದ ಪರ ವಕೀಲರು, ಮೇಲ್ನೋಟಕ್ಕೆ ಅಪರಾಧ ಎಸಗಿರುವುದು ಸಾಬೀತಾಗಿದೆ. ಹೀಗಾಗಿ ಮೂರ್ತಿಯನ್ನು ಅಮಾನತು ಮಾಡಲಾಗಿದೆ ಎಂದರು. ವಕೀಲರ ವಾದ ಆಲಿಸಿದ ಪೀಠ, ಆದೇಶವನ್ನು ಕಾಯ್ದಿರಿಸಿತು.

2016 ಹಾಗೂ 2017ನೇ ಸಾಲಿನಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆದಿದ್ದ ಅಧಿವೇಶನಕ್ಕೆ ಸಂಬಂಧಿಸಿದಂತೆ ಕೈಗೊಳ್ಳಲಾದ ಕಾಮಗಾರಿಗಳಲ್ಲಿ ಹಾಗೂ ಇತರೆ ಖರ್ಚು ವೆಚ್ಚಗಳಲ್ಲಿ ಅವ್ಯವಹಾರ ನಡೆದಿದೆ ಎಂದು ಆರೋಪದ ಹಿನ್ನೆಲೆಯಲ್ಲಿ ವಿಧಾನಸಭೆ ಸ್ಪೀಕರ್, ವಿಶೇಷ ಮಂಡಳಿಯ ಶಿಫಾರಸ್ಸಿನ ಮೇರೆಗೆ ಮೂರ್ತಿಯ ಅವರನ್ನು ಸೇವೆಯಿಂದ ಅಮಾನತುಗೊಳಿಸಿ 2018ರ ಡಿ.27ರಂದು ಆದೇಶ ಹೊರಡಿಸಿದ್ದರು. ಸ್ಪೀಕರ್ ಆದೇಶ ರದ್ದು ಕೋರಿ ಹೈಕೋರ್ಟ್ ಮೆಟ್ಟಿಲೇರಿದ್ದ ಮೂರ್ತಿ, ಆದೇಸ ಕಾನೂನು ಬಾಹಿರವಾಗಿದೆ. ಸ್ಪೀಕರ್ ನಿಯಮ ಉಲ್ಲಂಘಿಸಿ, ಅಧಿಕಾರ ವ್ಯಾಪ್ತಿ ಮೀರಿ ಆದೇಶ ಮಾಡಿದ್ದಾರೆ ಎಂದು ದೂರಿದ್ದರು.